**ಕರ್ನಾಟಕ ಸರ್ಕಾರ**

ಸಂಖ್ಯೆ: ಕಂಇ 158 ಟಿಎನ್‌ಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:04.06.2020

**ಸ್ಪಷ್ಟೀಕರಣ**

ರಾಜ್ಯ ಸರ್ಕಾರವು ಆದೇಶ ಸಂಖ್ಯೆ ಕಂಇ 158 ಟಿಎನ್‌ಆರ್ 2020, ದಿ. 31.05.2020ರಲ್ಲಿ ಕಂಟೈನ್‌ಮೆಂಟ್ ವಲಯಗಳಲ್ಲಿನ ಲಾಕ್‌ಡೌನ್ ಅನ್ನು ದಿ.30.06.2020 ರವರೆಗೆ ವಿಸ್ತರಿಸಲು ಮತ್ತು ಕಂಟೈನ್‌ಮೆಂಟ್ ವಲಯಗಳ ಹೊರಗಿನ ಪ್ರದೇಶಗಳಲ್ಲಿ ಹಂತಹಂತವಾಗಿ ನಿಷೇಧಿತ ಚಟುವಟಿಕೆಗಳನ್ನು ಪುನಃ ತೆರೆಯಲು ಆದೇಶ ಹೊರಡಿಸಿದೆ. ಸದರಿ ಲಾಕ್‌ಡೌನ್ ಕ್ರಮಗಳ ಮಾರ್ಗಸೂಚಿಗಳು ದಿ.30.06.2020 ರವರೆಗೆ ಜಾರಿಯಲ್ಲಿರುತ್ತವೆ.

ಅರಣ್ಯ ಮತ್ತು ವಿಹಾರಧಾಮಗಳ ಸಂಸ್ಥೆ ರವರು ಕಂಟೈನ್ಮೆಂಟ್ ವಲಯಗಳನ್ನು ಹೊರತುಪಡಿಸಿ ಅರಣ್ಯ ಪ್ರದೇಶಗಳಲ್ಲಿ ಸಫಾರಿ, ಚಾರಣ ಮತ್ತು ಇತ್ಯಾದಿ ಚಟುವಟಿಕಗಳನ್ನು ಪುನಃ ತೆರೆಯುವ ಬಗ್ಗೆ ಸ್ಪಷ್ಟೀಕರಣ/ಅನುಮತಿ ನೀಡುವಂತೆ ಕೋರಿರುತ್ತಾರೆ.

ಕೇಂದ್ರ ಗೃಹ ಮಂತ್ರಾಲಯದ ಆದೇಶ ಸಂಖ್ಯೆ 40-3/2020-ಡಿಎಂ-ಐ(ಎ), ದಿ.30.05.2020ರ ಮಾರ್ಗಸೂಚಿಗಳಲ್ಲಿ ದಿ. 08.06.2020ರ ನಂತರ ಆತಿಥ್ಯ ವಲಯದಲ್ಲಿನ ಚಟುವಟಿಕೆಗಳನ್ನು ಅನುಮತಿಸಲಾಗಿರುವುದನ್ನು ಗಮನಿಸಿ, ಜಂಗಲ್ ಲಾಡ್ಜ್‌ಗಳು ಮತ್ತು ರೆಸಾರ್ಟ್‌ಗಳು ಹಾಗೂ ಇದೇ ರೀತಿಯ ಆತಿಥ್ಯ ಸೇವೆಗಳನ್ನು ಒದಗಿಸುವ ಖಾಸಗಿ ಸಂಸ್ಥೆಗಳು ಸೇರಿದಂತೆ, ಅವುಗಳು ಒದಗಿಸುವ ಆತಿಥ್ಯ ಸೇವೆಗಳೊಂದಿಗೆ ಸಂಬಂಧಿಸಿದ ಎಲ್ಲಾ ಚಟುವಟಿಕೆಗಳನ್ನು ದಿ.08.06.2020 ರಿಂದ ಸಫಾರಿಗಳು, ಚಾರಣಗಳು ಮತ್ತು ಇತರ ಚಟುವಟಿಕೆಗಳು ಸೇರಿದಂತೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಕಾಲಕಾಲಕ್ಕೆ ನೀಡುವ ಮಾರ್ಗಸೂಚಿ/ಎಸ್.ಓ.ಪಿ.ಗಳನ್ನು ಕಟ್ಟುನಿಟ್ಟಾಗಿ ಪಾಲಿಸುವ ಹಾಗೂ ಎಲ್ಲಾ ಸಾಮಾಜಿಕ ಅಂತರ ಮತ್ತು ನೈರ್ಮಲ್ಯ ಕ್ರಮಗಳನ್ನು ಅಳವಡಿಸಿಕೊಂಡು, ನಿಗದಿಪಡಿಸಿದ ರಾಷ್ಟ್ರೀಯ ನಿರ್ದೇಶನಗಳಿಗೆ ಬದ್ಧರಾಗುವ ಷರತ್ತಿಗೊಳಪಟ್ಟು ಪುನರಾರಂಭಿಸಲು ಈ ಮೂಲಕ ಸ್ಪಷ್ಟಪಡಿಸಿ ಆದೇಶಿಸಲಾಗಿದೆ.

***(ಮುಖ್ಯ ಕಾರ್ಯದರ್ಶಿಯವರಿಂದ ಅನುಮೋದಿತ)***

**(ಟಿ.ಕೆ.ಅನಿಲ್ ಕುಮಾರ್)**
ಸರ್ಕಾರದ ಪ್ರಧಾನ ಕಾರ್ಯದರ್ಶಿ ಹಾಗೂ
ಸದಸ್ಯ ಕಾರ್ಯದರ್ಶಿ,
ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ
ಪ್ರಾಧಿಕಾರದ ರಾಜ್ಯ ಕಾರ್ಯಕಾರಿ ಸಮಿತಿ

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು.